# All India Radio: Bangalore
# National Bulletin In Kannada
# 26.07.2026  7.35 AM

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**26.07.2026  7.35 AM**

**<>><><*><><<>**

ಮುಖ್ಯಾಂಶಗಳು

೧. ಮನ್ ಕಿ ಬಾತ್‌ನ ೧೩೬ನೇ ಆವೃತ್ತಿ; ಇಂದು ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರಿಂದ ಮನದಾಳದ ಮಾತು

೨. ಸಾರ್ವಜನಿಕ ಪರೀಕ್ಷೆಗಳ ಅಕ್ರಮ ತಡೆ ತಿದ್ದುಪಡಿ ಮಸೂದೆ-೨೦೨೬; ನಾಳೆ ಲೋಕಸಭೆಯಲ್ಲಿ ಮಂಡನೆ

೩. ನೂತನ ಕೇಂದ್ರ ಶಿಕ್ಷಣ ಸಚಿವರಾಗಿ ಪ್ರಲ್ಹಾದ್ ಜೋಶಿ ನೇಮಕ

೪. ದೇಶಾದ್ಯಂತ ಇಂದು ಕಾರ್ಗಿಲ್ ವಿಜಯ್ ದಿವಸ್ ಆಚರಣೆ; ಯೋಧರ ಶೌರ್ಯ, ತ್ಯಾಗ ಸ್ಮರಣೆ

೫. ಯುವ ಹಾಕಿ-೫ಎಸ್ ಏಷ್ಯನ್ ಚಾಂಪಿಯನ್‌ಷಿಪ್; ಪಾಕಿಸ್ತಾನವನ್ನು ಮಣಿಸಿದ ಭಾರತಕ್ಕೆ ಚಿನ್ನ

**<>><><*><><<>**

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಇಂದು ಬೆಳಗ್ಗೆ ೧೧ ಗಂಟೆಗೆ ದೇಶ ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ಮಾತನಾಡಲಿದ್ದಾರೆ. ಇದು ಮನ್ ಕಿ ಬಾತ್‌ನ ೧೩೬ ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಹಾಗೂ ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಈ ಕಾರ್ಯಕ್ರಮ ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಬಿತ್ತರಗೊಳ್ಳಲಿದೆ.

**<>><><*><><<>**

ಸಾರ್ವಜನಿಕ ಪರೀಕ್ಷೆಗಳ ಅಕ್ರಮ ತಡೆ ತಿದ್ದುಪಡಿ ಮಸೂದೆ-೨೦೨೬ ರನ್ನು ಕೇಂದ್ರ ಸರ್ಕಾರ ನಾಳೆ ಲೋಕಸಭೆಯಲ್ಲಿ ಮಂಡಿಸಲಿದೆ. ೨೦೨೪ರ ಸಾರ್ವಜನಿಕ ಪರೀಕ್ಷೆಗಳ ಅಕ್ರಮ ತಡೆ ಕಾಯ್ದೆಗೆ ತಿದ್ದುಪಡಿ ತರಲು ಈ ಮಸೂದೆ ಉದ್ದೇಶಿಸಿದ್ದು, ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್ ಮಸೂದೆಯನ್ನು ಮಂಡಿಸಲಿದ್ದಾರೆ. ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ಪರೀಕ್ಷಾ ಅಕ್ರಮ ಪ್ರಕರಣಗಳಲ್ಲಿ ತ್ವರಿತ ನ್ಯಾಯಾಲಯಗಳ ಸ್ಥಾಪನೆ ಮತ್ತು ಕಠಿಣ ಶಿಕ್ಷೆ ವಿಧಿಸುವ ಸಂಬಂಧದ ಕರಡು ಮಸೂದೆಗೆ ಕೇಂದ್ರ ಸಚಿವ ಸಂಪುಟ ಶುಕ್ರವಾರ ಅನುಮೋದನೆ ನೀಡಿತ್ತು.

<>><><*><><<>

ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಯ ಬಳಿಕ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರು ನೂತನ ಶಿಕ್ಷಣ ಸಚಿವರಾಗಿ ನೇಮಕಗೊಂಡಿದ್ದಾರೆ. ತಮ್ಮ ಹಾಲಿ ಖಾತೆಗಳ ಜೊತೆಗೆ ಶಿಕ್ಷಣ ಸಚಿವಾಲಯದ ಹೆಚ್ಚುವರಿ ಜವಾಬ್ದಾರಿಯನ್ನು ಅವರಿಗೆ ವಹಿಸಲಾಗಿದೆ. ಪ್ರಲ್ಹಾದ್ ಜೋಶಿ ಅವರು ಪ್ರಸ್ತುತ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣೆ ಹಾಗೂ ನೂತನ ಮತ್ತು ನವೀಕರಿಸಬಹುದಾದ ಇಂಧನ ಸಚಿವರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಇದೇ ವೇಳೆ, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಅಂಗೀಕರಿಸಿದ್ದಾರೆ. ಈ ನಡುವೆ ತಮ್ಮ ಅನಿಸಿಕೆ ಹಂಚಿಕೊಂಡಿರುವ ಸಚಿವ ಪ್ರಲ್ಹಾದ ಜೋಶಿ, ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ, ದೇಶದ ಶಿಕ್ಷಣ ವ್ಯವಸ್ಥೆಯನ್ನು, ಬಲಪಡಿಸುವ ಜೊತೆಗೆ, ಪ್ರತಿಯೊಂದು ಮಗುವಿಗೆ, ಗುಣಮಟ್ಟದ ಶಿಕ್ಷಣ ಹಾಗೂ ಉತ್ತಮ ಕಲಿಕಾ ವಾತಾವರಣ ಕಲ್ಪಿಸಲು ಆದ್ಯತೆ ನೀಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

<>><><*><><<>

ಸಿಜೆಪಿ ತನ್ನ ಪ್ರಮುಖ ಬೇಡಿಕೆಗಳಿಗೆ ಕೇಂದ್ರ ಸರ್ಕಾರ ಸಮ್ಮತಿಸಿದ ಹಿನ್ನೆಲೆಯಲ್ಲಿ ಪ್ರತಿಭಟನೆಯನ್ನು ಹಿಂಪಡೆದಿದೆ. ಕೇಂದ್ರ ಸಚಿವರಾದ ಜೆ.ಪಿ. ನಡ್ಡಾ ಮತ್ತು ಡಾ. ಜಿತೇಂದ್ರ ಸಿಂಗ್ ಅವರು ನಿನ್ನೆ ಸಿಜೆಪಿ ನಿಯೋಗದೊಂದಿಗೆ ಮೂರನೇ ಸುತ್ತಿನ ಮಾತುಕತೆ ನಡೆಸಿದರು. ಪರೀಕ್ಷಾ ವ್ಯವಸ್ಥೆಯಲ್ಲಿ ಸುಧಾರಣೆ ಹಾಗೂ ಪ್ರಶ್ನೆಪತ್ರಿಕೆ ಸೋರಿಕೆ ತಡೆಗೆ ಸಂಬಂಧಿಸಿದ ಬೇಡಿಕೆಗಳ ಕುರಿತು ಚರ್ಚೆ ನಡೆಯಿತು. ಮಾತುಕತೆಯ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಜೆ.ಪಿ.ನಡ್ಡಾ, ಪ್ರತಿಭಟನಾಕಾರರ ವಿರುದ್ಧ ಯಾವುದೇ ಕ್ರಮ ಕೈಗೊಳ್ಳುವುದಿಲ್ಲ, ಎಫ್‌ಐಆರ್ ದಾಖಲಿಸದಿರಲು ಸರ್ಕಾರ ಒಪ್ಪಿಕೊಂಡಿದೆ ಎಂದು ತಿಳಿಸಿದರು. ಈಗಾಗಲೇ ದಾಖಲಾಗಿರುವ ಎಫ್‌ಐಆರ್‌ಗಳನ್ನು ಹಿಂಪಡೆಯಲಾಗುವುದು ಎಂದೂ ಹೇಳಿದರು. ನೀಟ್-ಯುಜಿ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ಹಿನ್ನೆಲೆಯಲ್ಲಿ ಆತ್ಮಹತ್ಯೆ ಮಾಡಿಕೊಂಡವರ ಕುಟುಂಬಗಳಿಗೆ ನಿಯಮಾನುಸಾರ ಗರಿಷ್ಠ ಪರಿಹಾರ ಒದಗಿಸಲಾಗುವುದು ಎಂದು ಅವರು ಹೇಳಿದರು. ಸಿಜೆಪಿ ರಾಷ್ಟ್ರೀಯ ವಕ್ತಾರ ಸೌರವ್ ದಾಸ್, ಸರ್ಕಾರ ಒಪ್ಪಿಕೊಂಡಿರುವ ಭರವಸೆಗಳನ್ನು ನಿಗದಿತ ಅವಧಿಯಲ್ಲಿ ಜಾರಿಗೊಳಿಸುವ ವಿಶ್ವಾಸದೊಂದಿಗೆ ಪ್ರತಿಭಟನೆ ಹಿಂಪಡೆಯುವುದಾಗಿ ಘೋಷಿಸಿದರು.

<>><><*><><<>

೧೯೯೯ರ ಕಾರ್ಗಿಲ್ ಯುದ್ಧದಲ್ಲಿ ದೇಶಕ್ಕಾಗಿ ಪ್ರಾಣತ್ಯಾಗ ಮಾಡಿದ ಭಾರತೀಯ ಯೋಧರ ಶೌರ್ಯ ಮತ್ತು ತ್ಯಾಗವನ್ನು ಸ್ಮರಿಸಲು ದೇಶಾದ್ಯಂತ ಇಂದು ಕಾರ್ಗಿಲ್ ವಿಜಯ್ ದಿವಸ್ ಆಚರಿಸಲಾಗುತ್ತಿದೆ. ಈ ದಿನವು ಕಾರ್ಗಿಲ್ ಯುದ್ಧದಲ್ಲಿ ಪಾಕಿಸ್ತಾನದ ವಿರುದ್ಧ ಭಾರತ ಸಾಧಿಸಿದ ವಿಜಯದ ೨೭ನೇ ವಾರ್ಷಿಕೋತ್ಸವ ಹಾಗೂ ಆಪರೇಷನ್ ವಿಜಯ್ ಯಶಸ್ವಿಯಾಗಿ ಪೂರ್ಣಗೊಂಡ ದಿನದ ಸ್ಮರಣಾರ್ಥ ಆಚರಿಸಲಾಗುತ್ತಿದೆ. ಆ ಕಾರ್ಯಾಚರಣೆಯಲ್ಲಿ ಭಾರತೀಯ ಸಶಸ್ತ್ರ ಪಡೆಗಳು ಜಮ್ಮು-ಕಾಶ್ಮೀರದ ಕಾರ್ಗಿಲ್ ಪ್ರದೇಶದಲ್ಲಿ ಪಾಕಿಸ್ತಾನದ ಸೈನಿಕರು ಹಾಗೂ ಉಗ್ರರು ಅತಿಕ್ರಮಿಸಿಕೊಂಡಿದ್ದ ಪ್ರದೇಶಗಳನ್ನು ಮರಳಿ ವಶಪಡಿಸಿಕೊಂಡಿದ್ದವು. ಕಾರ್ಗಿಲ್ ವಿಜಯ್ ದಿವಸದ ಅಂಗವಾಗಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ರಾಷ್ಟ್ರ ರಕ್ಷಣೆಗಾಗಿ ಪ್ರಾಣತ್ಯಾಗ ಮಾಡಿದ ವೀರ ಯೋಧರಿಗೆ ಗೌರವ

ನಮನ ಸಲ್ಲಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಸಚಿವರು, ೧೯೯೯ರ ಕಾರ್ಗಿಲ್ ಯುದ್ಧದಲ್ಲಿ ದುರ್ಗಮ ಪರ್ವತ ಶಿಖರಗಳಲ್ಲಿ ಅಸಾಧಾರಣ ಶೌರ್ಯ ಪ್ರದರ್ಶಿಸಿದ ಭಾರತೀಯ ಯೋಧರಿಗೆ ದೇಶ ಸದಾ ಋಣಿಯಾಗಿರಲಿದೆ ಎಂದು ಹೇಳಿದ್ದಾರೆ. ವೀರ ಯೋಧರ ಅಚಲ ಧೈರ್ಯ, ಪರಮ ತ್ಯಾಗ ಮತ್ತು ಸಂಕಲ್ಪವು ದೇಶಭಕ್ತಿ, ಕರ್ತವ್ಯನಿಷ್ಠೆ ಹಾಗೂ ಮಾತೃಭೂಮಿಯ ಮೇಲಿನ ನಿಸ್ವಾರ್ಥ ಸೇವೆಯ ಮನೋಭಾವದಿಂದ ಮುಂದಿನ ಪೀಳಿಗೆಗಳಿಗೆ ನಿರಂತರವಾಗಿ ಸ್ಫೂರ್ತಿ ನೀಡುತ್ತಲೇ ಇರುತ್ತದೆ ಎಂದು ಸಚಿವ ರಾಜನಾಥ್ ಸಿಂಗ್ ತಿಳಿಸಿದ್ದಾರೆ.

<><><*><><<>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಮೊಲ್ಡೋವಾ, ಉತ್ತರ ಮ್ಯಾಸಿಡೋನಿಯಾ ಹಾಗೂ ರೊಮೇನಿಯಾ ರಾಷ್ಟ್ರಗಳ ಸರ್ಕಾರಿ ಭೇಟಿಯನ್ನು ಪೂರ್ಣಗೊಳಿಸಿ ಇಂದು ಬೆಳಿಗ್ಗೆ ನವದೆಹಲಿಗೆ ಮರಳಿದ್ದಾರೆ. ಭೇಟಿಯ ವೇಳೆ ಮೂರು ರಾಷ್ಟ್ರಗಳ ಉನ್ನತ ನಾಯಕರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದ ರಾಷ್ಟ್ರಪತಿ, ವ್ಯಾಪಾರ ವೇದಿಕೆಗಳನ್ನು ಉದ್ದೇಶಿಸಿ ಮಾತನಾಡಿದರು ಹಾಗೂ ಭಾರತೀಯ ಸಮುದಾಯದ ಸದಸ್ಯರೊಂದಿಗೆ ಸಂವಾದ ನಡೆಸಿದರು. ಈ ಭೇಟಿ ಹಲವು ಐತಿಹಾಸಿಕ ಮೈಲಿಗಲ್ಲುಗಳಿಗೆ ಸಾಕ್ಷಿಯಾಗಿದೆ. ಮೊಲ್ಡೋವಾ ಮತ್ತು ಉತ್ತರ ಮ್ಯಾಸಿಡೋನಿಯಾಗೆ ಭಾರತದ ರಾಷ್ಟ್ರಪತಿಯ ಮೊದಲ ಸರ್ಕಾರಿ ಭೇಟಿ ಇದಾಗಿದ್ದು, ರೊಮೇನಿಯಾಕ್ಕೆ ಮೂರು ದಶಕಗಳ ಬಳಿಕ ನಡೆದ ಮೊದಲ ರಾಷ್ಟ್ರಪತಿ ಭೇಟಿ ಎಂಬ ಹೆಗ್ಗಳಿಕೆಯೂ ಪಡೆದಿದೆ. ರೊಮೇನಿಯಾದ ಬುಖಾರೆಸ್ಟ್ ಆರ್ಥಿಕ ಅಧ್ಯಯನ ವಿಶ್ವವಿದ್ಯಾಲಯವು ರಾಷ್ಟ್ರಪತಿ ಮುರ್ಮು ಅವರಿಗೆ ಗೌರವ ಡಾಕ್ಟರೇಟ್ ನೀಡಿ ಸನ್ಮಾನಿಸಿತು. ಭಾರತ ಮತ್ತು ಪೂರ್ವ ಯುರೋಪಿನ ರಾಷ್ಟ್ರಗಳ ನಡುವಿನ ಬಾಂಧವ್ಯಕ್ಕೆ ಈ ಭೇಟಿ ಹೊಸ ಚೈತನ್ಯ ನೀಡಿದೆ.

<><><*><><<>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಸಂಜೆ ೪.೩೦ಕ್ಕೆ ವೀಡಿಯೊ ಸಂವಾದದ ಮೂಲಕ ವಿಕಸಿತ ವೈಬ್ರಂಟ್ ವಿಲೇಜ್ ಕಾರ್ಯಕ್ರಮ-೨೦೨೬ರಲ್ಲಿ ಭಾಗವಹಿಸುವವರೊಂದಿಗೆ ಸಂವಾದ ನಡೆಸಲಿದ್ದಾರೆ. ದೇಶದ ಎಲ್ಲ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳನ್ನು ಪ್ರತಿನಿಧಿಸುವ ೪೦೦ಕ್ಕೂ ಹೆಚ್ಚು ಯುವಕರು ಈ ಸಂವಾದದಲ್ಲಿ ಭಾಗವಹಿಸಲಿದ್ದಾರೆ. ಕಳೆದ ತಿಂಗಳ ೪ರಿಂದ ೩೦ರವರೆಗೆ ಎರಡು ಹಂತಗಳಲ್ಲಿ ಲಡಾಖ್, ಹಿಮಾಚಲ ಪ್ರದೇಶ ಹಾಗೂ ಉತ್ತರಾಖಂಡದ ೭೪ ಗಡಿಗ್ರಾಮಗಳಲ್ಲಿ ಈ ಕಾರ್ಯಕ್ರಮ ಆಯೋಜಿಸಲಾಗಿತ್ತು. ದೇಶವ್ಯಾಪಿ ಆನ್‌ಲೈನ್ ರಸಪ್ರಶ್ನೆ ಸ್ಪರ್ಧೆಯ ಮೂಲಕ ೩ ಲಕ್ಷಕ್ಕೂ ಹೆಚ್ಚು ಯುವಕರಲ್ಲಿ ಆಯ್ಕೆಯಾದವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಕಾರ್ಯಕ್ರಮದ ಅಂಗವಾಗಿ ಯುವಕರು ಸ್ಥಳೀಯ ಸಮುದಾಯಗಳೊಂದಿಗೆ ವಾಸವಿದ್ದು, ಸ್ವಚ್ಛತಾ ಅಭಿಯಾನ, ಸರ್ಕಾರಿ ಯೋಜನೆಗಳ ಜಾಗೃತಿ ಕಾರ್ಯಕ್ರಮ, ಯುವ ಸಮಾವೇಶ, ಸಾಂಸ್ಕೃತಿಕ ವಿನಿಮಯ, ವೃಕ್ಷಾರೋಪಣ, ಮಾದರಿ ಪಂಚಾಯಿತಿ ಚಟುವಟಿಕೆ, ಸ್ಥಳೀಯ ಕುಶಲಕರ್ಮಿಗಳೊಂದಿಗೆ ಸಂವಾದ ಹಾಗೂ ಕಾರ್ಯತಂತ್ರದ ಮಹತ್ವದ ಸಂಸ್ಥೆಗಳ ಭೇಟಿ ಸೇರಿದಂತೆ ವಿವಿಧ ಚಟುವಟಿಕೆಗಳಲ್ಲಿ ಭಾಗವಹಿಸಿದರು. ಈ ಕಾರ್ಯಕ್ರಮವು ಗಡಿಭಾಗಗಳ ಸಾಮಾಜಿಕ-ಆರ್ಥಿಕ ಪರಿಸ್ಥಿತಿ, ಸಾಂಸ್ಕೃತಿಕ ಪರಂಪರೆ ಮತ್ತು ಅಭಿವೃದ್ಧಿಯ ಆಶಯಗಳನ್ನು ಯುವಕರಿಗೆ ನೇರವಾಗಿ ಪರಿಚಯಿಸುವುದರ ಜೊತೆಗೆ ರಾಷ್ಟ್ರೀಯ ಏಕತೆ ಹಾಗೂ ಗಡಿಗ್ರಾಮಗಳ ಕಾರ್ಯತಂತ್ರದ ಮಹತ್ವದ ಕುರಿತು ಅರಿವು ಮೂಡಿಸಿದೆ.

<><><*><><<>

ಸಿಕ್ಕಿಂನ ನಾಥುಲಾ ಮಾರ್ಗದ ಮೂಲಕ ಕೈಲಾಸ ಮಾನಸಸರೋವರ ಯಾತ್ರೆ ಕೈಗೊಂಡಿದ್ದ ೫ನೇ ತಂಡವು ಪವಿತ್ರ ಯಾತ್ರೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ ಸುರಕ್ಷಿತವಾಗಿ ಗ್ಯಾಂಗ್ಟಾಕ್‌ಗೆ ಮರಳಿದೆ.

**<>><><*><><<>**

ಎಫ್‌ಐಎಚ್ ಯುವ ಹಾಕಿ-೫ಎಸ್ ಏಷ್ಯನ್ ಚಾಂಪಿಯನ್‌ಷಿಪ್‌ನ ಪುರುಷರ ಫೈನಲ್‌ನಲ್ಲಿ ಭಾರತ, ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನವನ್ನು ೩-೧ ಗೋಲುಗಳಿಂದ ಮಣಿಸಿ ಚಾಂಪಿಯನ್ ಪಟ್ಟ ಅಲಂಕರಿಸಿದೆ. ರೋಮಿತ್ ಪಾಲ್, ನಾಯಕ ಕೇತನ ಕುಶ್ವಾಹ ಹಾಗೂ ಶಾರುಖ್ ಅಲಿ ಗಳಿಸಿದ ಗೋಲುಗಳ ನೆರವಿನಿಂದ ಭಾರತ ಪ್ರಶಸ್ತಿ ಗೆದ್ದಿತು. ಈ ಗೆಲುವಿನೊಂದಿಗೆ ಭಾರತ ಎಲೈಟ್ ಪೂಲ್ ಅಂಕಪಟ್ಟಿಯಲ್ಲೂ ಅಗ್ರಸ್ಥಾನ ಪಡೆದಿದೆ. ಫೈನಲ್ ಪ್ರವೇಶಿಸಿರುವುದರಿಂದ ಭಾರತ ಮತ್ತು ಪಾಕಿಸ್ತಾನ ಎರಡೂ ತಂಡಗಳು ಚೊಚ್ಚಲ ಎಫ್‌ಐಎಚ್ ಯುವ ಹಾಕಿ-೫ಎಸ್ ವಿಶ್ವಕಪ್‌ಗೆ ಅರ್ಹತೆ ಪಡೆದಿವೆ. ಇದೇ ವೇಳೆ, ಮಹಿಳೆಯರ ವಿಭಾಗದಲ್ಲಿ ಭಾರತದ ಕಿರಿಯರ ತಂಡ ಚೀನಾದ ವಿರುದ್ಧದ ಫೈನಲ್‌ನಲ್ಲಿ ಹೋರಾಟದ ಪ್ರದರ್ಶನ ನೀಡಿದರೂ ಬೆಳ್ಳಿ ಪದಕಕ್ಕೆ ತೃಪ್ತಿಪಟ್ಟಿತು. ಎರಡೂ ಭಾರತೀಯ ತಂಡಗಳ ಸಾಧನೆಯನ್ನು ಅಭಿನಂದಿಸಿರುವ ಹಾಕಿ ಇಂಡಿಯಾ, ಪುರುಷರ ಚಿನ್ನದ ಪದಕ ವಿಜೇತ ತಂಡದ ಪ್ರತಿಯೊಬ್ಬ ಆಟಗಾರರಿಗೆ ೨ ಲಕ್ಷ ರೂಪಾಯಿ ಹಾಗೂ ಸಹಾಯಕ ಸಿಬ್ಬಂದಿಯ ಪ್ರತಿಯೊಬ್ಬ ಸದಸ್ಯರಿಗೆ ೧ ಲಕ್ಷ ರೂಪಾಯಿ ನಗದು ಬಹುಮಾನ ಘೋಷಿಸಿದೆ. ಮಹಿಳಾ ತಂಡದ ಪ್ರತಿಯೊಬ್ಬ ಆಟಗಾರ್ತಿಗೆ ೧ ಲಕ್ಷ ರೂಪಾಯಿ ಹಾಗೂ ಸಹಾಯಕ ಸಿಬ್ಬಂದಿಯ ಪ್ರತಿಯೊಬ್ಬ ಸದಸ್ಯರಿಗೆ ೫೦ ಸಾವಿರ ರೂಪಾಯಿ ಬಹುಮಾನ ನೀಡುವುದಾಗಿ ಪ್ರಕಟಿಸಿದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>**